ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

**ಸಂಖ್ಯೆ/ಕರಾಸಾ/ಕೇಕ/ಸಂ/ಕೇ.ತ.ದ/ 4936 /19-20** **ದಿನಾಂಕ: 20/02/2020**

## ಸುತ್ತೋಲೆ ಸಂಖ್ಯೆ: 1531

ವಿಷಯ: ಮಾರ್ಗ ತನಿಖಾ ಪದ್ಧತಿಯಲ್ಲಿನ ಮಾರ್ಗದರ್ಶನಗಳ ಬಗ್ಗೆ.
ಉಲ್ಲೇಖ: ಸುತ್ತೋಲೆ-166 ದಿನಾಂಕ: 28/04/1972

...........

ಕರಾರಸಾ ನಿಗಮ ರಾಜ್ಯದೊಳಗೆ ಹಾಗೂ ನೆರೆ ರಾಜ್ಯದ ವಿವಿಧ ಸ್ಥಳಗಳಿಗೆ ಕಾರ್ಯಾಚರಣೆ ಮಾಡುತ್ತಿರುವ ವಾಹನಗಳನ್ನು ಪರಿಣಾಮಕಾರಿಯಾಗಿ ತನಿಖೆಗೆ ಒಳಪಡಿಸಿದಾಗ ಮಾರ್ಗ ತನಿಖಾ ಸಿಬ್ಬಂದಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಆದರೆ ಪ್ರಯಾಣಿಕರು ವಾಹನದಲ್ಲಿ ಪ್ರಯಾಣಿಸುವಾಗ ಆಕಸ್ಮಿಕವಾಗಿ ಪ್ರಯಾಣದ ಟಿಕೇಟ್ ಕಳೆದುಕೊಂಡ (Loss of ticket) ಸಂದರ್ಭಗಳಲ್ಲಿ ಮಾರ್ಗ ತನಿಖಾ ಸಿಬ್ಬಂದಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸ್ಪಷ್ಟ ನಿರ್ದೇಶನಗಳು ಇರುವುದಿಲ್ಲ. ಈ ಸಂದರ್ಭಗಳಲ್ಲಿ ಮಾರ್ಗ ತನಿಖಾ ಸಿಬ್ಬಂದಿಗಳು ಈ ಕೆಳಕಂಡಂತೆ ಮಾರ್ಗಸೂಚಿಗಳನ್ನು ಪಾಲಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ.

1. ಪ್ರಯಾಣಿಕರು ವಾಹನದಲ್ಲಿ ಪ್ರಯಾಣಿಸುವಾಗ ಟಿಕೇಟ್ ಪಡೆದುಕೊಂಡು, ಆಕಸ್ಮಿಕವಾಗಿ ಪ್ರಯಾಣದ ಟಿಕೇಟ್ ಕಳೆದುಕೊಂಡ (Loss of ticket) ಸಂದರ್ಭಗಳಲ್ಲಿ ಮಾರ್ಗ ತನಿಖಾ ಸಿಬ್ಬಂದಿಯು ಇಟಿಎಂ/ಮುಂಗಡ ಕಾಯ್ದಿರಿಸಿದ ಟ್ರಿಪ್‌ಶೀಟ್‌ಗಳಿಂದ ಸದರಿ ಪ್ರಯಾಣಿಕರು ಟಿಕೇಟ್ ಪಡೆದಿದ್ದು, ತದನಂತರ ಟಿಕೇಟ್ ಕಳೆದುಕೊಂಡಿರುವ ಬಗ್ಗೆ ಖಾತರಿಪಡಿಸಿಕೊಂಡು, ತನಿಖಾ ಸ್ಥಳದಿಂದ ಮುಂದೆ ಪ್ರಯಾಣಿಕರು ಪ್ರಯಾಣಿಸುವ ಸ್ಥಳಕ್ಕೆ ನಿರ್ವಾಹಕರ ಇಟಿಎಂ ಯಂತ್ರದಿಂದ ಮರುಟಿಕೇಟ್ ವಿತರಿಸುವುದು ಹಾಗೂ ಮರುವಿತರಣೆ ಟಿಕೇಟ್‌ನ ಮೊತ್ತವನ್ನು ಸಂಬಂಧಿಸಿದ ಪ್ರಯಾಣಿಕರಿಂದ ಪಡೆಯುವುದು ಹಾಗೂ ಈ ಬಗ್ಗೆ ಮಾರ್ಗಪತ್ರದಲ್ಲಿ ಷರಾ ದಾಖಲಿಸುವುದು. ಈ ರೀತಿಯ ಸಂದರ್ಭದಲ್ಲಿ ನಿರ್ವಾಹಕರ ವಿರುದ್ಧ ಯಾವುದೇ ಪ್ರಕರಣ ದಾಖಲಿಸಬಾರದು.

ಈ ಸುತ್ತೋಲೆಯಲ್ಲಿನ ಅಂಶಗಳ ಬಗ್ಗೆ ಚಾಲನಾ ಸಿಬ್ಬಂದಿಗಳಿಗೆ ಹಾಗೂ ಮಾರ್ಗ ತನಿಖಾ ಸಿಬ್ಬಂದಿಗೆ ಅಗತ್ಯ ತಿಳುವಳಿಕೆಯನ್ನು ನೀಡುವುದು. ಈ ಸುತ್ತೋಲೆ ಈ ಕೂಡಲೇ ಜಾರಿಗೆ ಬರುತ್ತದೆ. ಸುತ್ತೋಲೆ ಸ್ವೀಕರಿಸಿದ್ದಕ್ಕೆ ಸ್ವೀಕೃತಿ ಮತ್ತು ಅನುಸರಣಾ ವರದಿ ನೀಡುವುದು.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

**ಪ್ರತಿಯನ್ನು:**
ವ್ಯವಸ್ಥಾಪಕ ನಿರ್ದೇಶಕರು, ಬೆಂಮನಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆರವರ ಮಾಹಿತಿಗಾಗಿ.
ಎಲ್ಲಾ ಇಲಾಖಾ ಮುಖ್ಯಸ್ಥರು, ಕೇಂದ್ರ ಕಛೇರಿ, ಕ.ರಾ.ರ.ಸಾ ನಿಗಮ, ಬೆಂಗಳೂರು ರವರ ಮಾಹಿತಿಗಾಗಿ.
ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ರಾ.ರ.ಸಾ ನಿಗಮ ರವರ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
ಹಿರಿಯ ಆಪ್ತ ಕಾರ್ಯದರ್ಶಿ/ಆಪ್ತ ಕಾರ್ಯದರ್ಶಿಗಳಿಗೆ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಸಿ&ಪ)/ ನಿರ್ದೇಶಕರು (ಭ&ಜಾ), ಕ.ರಾ.ರ.ಸಾ ನಿಗಮ ರವರ ಮಾಹಿತಿಗಾಗಿ.
ಎಲ್ಲಾ ವಿಭಾಗೀಯ ಸಂಚಲನಾಧಿಕಾರಿ/ತನಿಖಾ ಸಂಯೋಜಕರು, ಕರಾರಸಾ ನಿಗಮ ರವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

Scanned with OKEN Scanner